# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಶನಿವಾರ, ೨೦ ಸೆಪ್ಟೆಂಬರ್, ೨೦೨೫ (ಭಾದ್ರಪದ ೨೯, ಶಕವರ್ಷ ೧೯೪೭)<br>BENGALURU, SATURDAY, 20 SEPTEMBER, 2025 (BHADRAPADA 29, SHAKAVARSHA 1947) | ನಂ. ೬೨೦<br>No. 620 |
|---|---|---|


## ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 451 ಎಂಎನ್‌ವೈ 2025

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಡಾ: ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ: 19-09-2025

## ಅಧಿಸೂಚನೆ

ಸಮಸಂಖ್ಯೆಯ ಅಧಿಸೂಚನೆಯ ದಿನಾಂಕ 19-09-2025 ರ ಅನ್ವಯ ಘನತ್ಯಾಜ್ಯ ನಿರ್ವಹಣೆಯನ್ನು ಕರ್ನಾಟಕ ಅಗತ್ಯ ಸೇವೆಗಳ ನಿರ್ವಹಣಾ ಕಾಯ್ದೆ, 2013 ಪ್ರಕಾರ ಅಗತ್ಯ ಸೇವೆ ಎಂದು ಪರಿಗಣಿಸಿ ಆದೇಶ ಹೊರಡಿಸಲಾಗಿದೆ. ಘನತ್ಯಾಜ್ಯ ನಿರ್ವಹಣೆ ನಿಯಮಾವಳಿ, 2016ರ ಪ್ರಕಾರ ಎಲ್ಲಾ ಪೌರ ಸಂಸ್ಥೆಗಳು ತಮ್ಮ ಸರಹದ್ದಿನ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ, ಶೇಖರಣೆ, ವಿಂಗಡಣೆ, ಸಾಗಾಣಿಕೆ, ಸಂಸ್ಕರಣೆ ಮತ್ತು ವಿಲೇವಾರಿ ಕಾರ್ಯಗಳನ್ನು ಚಾಚು ತಪ್ಪದೇ ನಿರ್ವಹಿಸಬೇಕಾಗಿದೆ.

ಮುಂದುವರೆದು, ಕರ್ನಾಟಕ ಅಗತ್ಯ ಸೇವೆಗಳ ನಿರ್ವಹಣಾ ಕಾಯ್ದೆ, 2013ರ ಕಲಂ 3ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಬೆಂಗಳೂರು ಕೇಂದ್ರ ನಗರ ಪಾಲಿಕೆ, ಬೆಂಗಳೂರು ಉತ್ತರ ನಗರ ಪಾಲಿಕೆ, ಬೆಂಗಳೂರು ದಕ್ಷಿಣ ನಗರ ಪಾಲಿಕೆ, ಬೆಂಗಳೂರು ಪೂರ್ವ ನಗರ ಪಾಲಿಕೆ ಮತ್ತು ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯತೆಯನ್ನು ಕಾಪಾಡಿ, ಸಾರ್ವಜನಿಕರ ಆರೋಗ್ಯಕ್ಕೆ ಏರುಪೇರಾಗುವುದನ್ನು ತಡೆಗಟ್ಟಲು ಒಟ್ಟಾರೆ ಸಾರ್ವಜನಿಕರ ಹಿತದೃಷ್ಟಿಯಿಂದ ಘನತ್ಯಾಜ್ಯ ನಿರ್ವಹಣೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತ ಅಥವಾ ಮೇಲೆ ತಿಳಿಸಲಾದ ಐದು ಬೆಂಗಳೂರು ನಗರ ಪಾಲಿಕೆಗಳೊಂದಿಗೆ ನೇರವಾಗಿ ಹಾಗೂ ಸರಬರಾಜುದಾರರು/ಗುತ್ತಿಗೆದಾರರುಗಳ ಅಧೀನದಲ್ಲಿ ತೊಡಗಿಸಿಕೊಂಡಿರುವ ಎಲ್ಲಾ ಪೌರ ಕಾರ್ಮಿಕರು, ಆಟೋ ಸಹಾಯಕರು, ಕಾಂಪ್ಯಾಕ್ಟರ್ ಲೋಡರ್‌ಗಳು, ಚಾಲಕರುಗಳು ತಕ್ಷಣದಿಂದಲೇ ಜಾರಿಗೆ ಬರುವಂತೆ ಮುಂದಿನ ಒಂದು ವರ್ಷದ ಅವಧಿಗೆ ಮುಷ್ಕರ ಹೂಡುವುದನ್ನು ನಿಷೇದಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಲಕ್ಷ್ಮೀಸಾಗರ್ ಎನ್.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಜಿ.ಬಿ.ಎ & ಬೆಂ.ನ.ಪಾ-1)


ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು





R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



THAMMAIAH